## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 26 |
| 2 | ಸದಸ್ಯರ ಹೆಸರು | : | ಶ್ರೀ ಎನ್ ರವಿಕುಮಾರ್ |
| 3 | ಉತ್ತರಿಸಬೇಕಾದ ದಿನಾಂಕ | : | 16.07.2019 |
| 4 | ಉತ್ತರಿಸಬೇಕಾದ ಸಚಿವರು | : | ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ</td><td>2018-19 ನೇ ಸಾಲಿನಲ್ಲಿ ಖಾಸಗಿ ವೈದ್ಯಕೀಯ ಕಾಲೇಜುಗಳು ಸರ್ಕಾರಕ್ಕೆ ಎಂ.ಡಿ.ಎಂ.ಎಸ್. ಸ್ನಾತಕೋತ್ತರ ವೈದ್ಯಕೀಯ ವಿಭಾಗದ 429 ಸೀಟುಗಳನ್ನು ಬಿಟ್ಟುಕೊಟ್ಟಿದ್ದು ಸರ್ಕಾರವು ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಗೆ 576 ಸೀಟುಗಳನ್ನು ಬಿಟ್ಟು ಕೊಟ್ಟಿರುವುದು ಯಾವ ಒಡಂಬಡಿಕೆಯ ಮೇರೆಗೆ; ಇದರಿಂದ ರಾಜ್ಯದ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗಾದ ಉಪಯೋಗವೇನು;</td><td>ಸರ್ಕಾರ ಹಾಗೂ ಕಾಲೇಜು ಆಡಳಿತ ಮಂಡಳಿಗಳೊಂದಿಗೆ ಪರಸ್ಪರ ಒಡಂಬಡಿಕೆ ಒಪ್ಪಂದವಾಗಿರುತ್ತದೆ.
<table>
<tr><th>Colleges</th><th>Govt. seats</th><th>Private Seats</th></tr>
<tr><td>Minority</td><td>20%</td><td>55%</td></tr>
<tr><td>Non-Minority</td><td>33%</td><td>42%</td></tr>
</table>
ಖಾಸಗಿ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಪರಸ್ಪರ ಒಡಂಬಡಿಕೆ ಒಪ್ಪಂದದ ಮೂಲಕ Subsidized ದರದಲ್ಲಿ ಸೀಟುಗಳು ದೊರೆಯುತ್ತವೆ.</td></tr>
<tr><td>ಆ</td><td>2018-19 ನೇ ಸಾಲಿನಲ್ಲಿ ಸ್ನಾತಕೋತ್ತರ ವೈದ್ಯಕೀಯ ಪ್ರವೇಶಕ್ಕಾಗಿ ಕೆ ಇ ಎ ವತಿಯಿಂದ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣಕ್ಕಾಗಿ ಪ್ರವೇಶಾವಕಾಶ ದೊರೆತ್ತಿರುವುದಿಲ್ಲ; ಇವರಲ್ಲಿ ರಾಜ್ಯದ ವಿದ್ಯಾರ್ಥಿಗಳೆಷ್ಟು;</td><td>ಸ್ನಾತಕೋತ್ತರ ವೈದ್ಯಕೀಯ ಪ್ರವೇಶಕ್ಕಾಗಿ ಕೆ.ಇ.ಎ ವತಿಯಿಂದ ನಡೆಸಲಾದ ಸಂದರ್ಶನದಲ್ಲಿ ಹಾಜರಾಗಿರುವ ವಿದ್ಯಾರ್ಥಿಗಳು ಸಂಖ್ಯೆ-12632.<br>ವೈದ್ಯಕೀಯ ಶಿಕ್ಷಣ ದೊರೆಯದ ಅನ್ಯ ರಾಜ್ಯದ ವಿದ್ಯಾರ್ಥಿಗಳು ಸಂಖ್ಯೆ-5518<br>ರಾಜ್ಯದ ವಿದ್ಯಾರ್ಥಿಗಳು-4328.</td></tr>
<tr><td>ಇ</td><td>2018-19 ನೇ ಸಾಲಿನಲ್ಲಿ ಸ್ನಾತಕೋತ್ತರ ವೈದ್ಯಕೀಯ ಪ್ರವೇಶಕ್ಕಾಗಿ ಕೆ.ಇ.ಎ ವತಿಯಿಂದ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಅನ್ಯ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಪ್ರವೇಶಾವಕಾಶ ದೊರೆತಿವೆ;</td><td>ಅನ್ಯ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ-6003.<br>ರಾಜ್ಯದ ವಿದ್ಯಾರ್ಥಿಗಳ ವೈದ್ಯಕೀಯ ಪ್ರವೇಶಾತಿ ಸಂಖ್ಯೆ-485.</td></tr>
<tr><td>ಈ</td><td>ರಾಜ್ಯದಲ್ಲಿ ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣಕ್ಕೆ</td><td>ರಾಜ್ಯದಲ್ಲಿ ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣಕ್ಕೆ</td></tr>
</table>

| | | |
|---|---|---|
| | ಪ್ರವೇಶ ಕೋರಿ ಅರ್ಜಿ ಸಲ್ಲಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು: ಪೂರೈಕೆ ಮತ್ತು ಬೇಡಿಕೆಯ ನಡುವೆ ಅಘಾಧವಾದ ಅಂತರವಿರುವುದರಿಂದ ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶದಲ್ಲಿ ಅಕ್ರಮ ಅವ್ಯವಹಾರಗಳಾಗುತ್ತಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ: ಸೀಟುಗಳ ಸಂಖ್ಯೆ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಪ್ರವೇಶ ಕೋರಿ ಅರ್ಜಿ ಸಲ್ಲಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ- 12632 ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶದಲ್ಲಿ ಅಕ್ರಮ ಅವ್ಯವಹಾರಗಳು ನಡೆದಿರುವುದಿಲ್ಲ. ಹೊಸದಾದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳಿಗೆ ಸರಿಸಮಾನವಾದ ಸಿ.ಪಿ.ಎಸ್ ಕೋರ್ಸ್ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆಸ್ಪತ್ರೆಯಲ್ಲಿ ಡಿ.ಎನ್.ಬಿ ಕೋರ್ಸ್ ಶುರುಮಾಡಲಾಗಿದ್ದು ಮುಂದುವರೆದು ಉಳಿದ ವೈದ್ಯಕೀಯ ಕಾಲೇಜುಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳಿಗೆ ಹೆಚ್ಚುವರಿ ಕೋರಿ ಎಂ.ಸಿ.ಐ.ಗೆ ಅರ್ಜಿ ಸಲ್ಲಿಸಲಾಗಿದೆ. |

ಸಂಖ್ಯೆ:ಎಂಇಡಿ /42/ ಆರ್‌ಜಿಯು/2019

(ಈ ತುಕಾರಾಮ್)
ವೈದ್ಯಕೀಯ ಶಿಕ್ಷಣ ಸಚಿವರು.